# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1022 (1078). |
| ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ). |
| ಉತ್ತರಿಸುವ ದಿನಾಂಕ | 17.03.2025. |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು. |

<table>
<tr><th>ಕ್ರ.<br>ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿನ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಬಿಡುಗಡೆಗೊಳಿಸಲಾಗಿರುವ ಅನುದಾನ ಎಷ್ಟು;<br>(ವಿಶ್ವವಿದ್ಯಾಲಯ/ಅನುದಾನವಾರು ಸಂಪೂರ್ಣ ಮಾಹಿತಿ ನೀಡುವುದು)</td><td>ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿನ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಬಿಡುಗಡೆಗೊಳಿಸಲಾಗಿರುವ ಅನುದಾನದ (ವಿಶ್ವವಿದ್ಯಾಲಯ/ಅನುದಾನವಾರು) ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ.</td></tr>
<tr><td>(ಆ)</td><td>ಪ್ರಸ್ತುತ ರಾಜ್ಯದಲ್ಲಿನ ಎಷ್ಟು ವಿಶ್ವವಿದ್ಯಾಲಯಗಳನ್ನು ರದ್ದು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆ; ಇದ್ದಲ್ಲಿ ಯಾವ ಕಾರಣಕ್ಕಾಗಿ; (ವಿವರಣೆಗಳೊಂದಿಗೆ ಮಾಹಿತಿ ಒದಗಿಸುವುದು)</td><td rowspan="2">ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸನ್ಮಾನ್ಯ ಉಪಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಬಗ್ಗೆ ಸಭೆ ನಡೆಸಿದ್ದು, ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ಎಲ್ಲಾ ಸಮಸ್ಯೆಗಳೊಂದಿಗೆ ರಾಜ್ಯದಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಅವರ ಮುಂಬರುವ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ಕೆಲವು ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ವಿದ್ಯಾರ್ಥಿಗಳ ಪ್ರವೇಶಾತಿ, ಮೂಲಸೌಲಭ್ಯದ ಕೊರತೆ ಮುಂತಾದ ಪ್ರಮುಖ ಅಂಶಗಳ ಕುರಿತು ಮೊದಲ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾದ ಸಲಹೆಗಳನ್ನು ಪರಾಮರ್ಶಿಸಿ ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟದ ಮುಂದೆ ಮಂಡಿಸಿ, ಅದರ ನಿರ್ಣಯದಂತೆ ಮುಂದಿನ ಕ್ರಮವಹಿಸಲಾಗುವುದು.</td></tr>
<tr><td>(ಇ)</td><td>ಯಾವ ಯಾವ ವಿಶ್ವವಿದ್ಯಾಲಯಗಳನ್ನು ರದ್ದು ಮಾಡಲಾಗುತ್ತಿದೆ;</td></tr>
<tr><td>(ಈ)</td><td>ವಿಶ್ವವಿದ್ಯಾಲಯ 2000ರ ಕಾಯ್ದೆಯನ್ವಯ ಅವಲೋಕನ ಆಯೋಗವನ್ನು 5 ವರ್ಷಗಳಿಗೊಮ್ಮೆ ರಚಿಸಿ ಅವಲೋಕನ ಮಾಡಬೇಕಾಗಿದ್ದು ಅದರಂತೆ ಆಯೋಗ ರಚನೆ ಮಾಡಲಾಗಿದೆಯೇ; ಮಾಡಿದ್ದಲ್ಲಿ ಪ್ರತಿ ಒದಗಿಸುವುದು;</td><td>ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ-2000ರ ಪ್ರಕರಣ 71ರನ್ವಯ ರಾಜ್ಯ ಸರ್ಕಾರವು ವಿಶ್ವವಿದ್ಯಾಲಯದ ಪುನರಾವಲೋಕನ ಆಯೋಗವನ್ನು ರಚಿಸಲಾಗಿರುತ್ತದೆ. (ಪ್ರತಿಯನ್ನು ಅನುಬಂಧ-2ರಲ್ಲಿ ಒದಗಿಸಿದೆ). ಸದರಿ ಆಯೋಗವು ವರದಿಯನ್ನು ಸರ್ಕಾರಕ್ಕೆ ನೀಡಿದ್ದು, ಸದರಿ ವರದಿಯ ಮೇಲೆ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಗೌರವಾನ್ವಿತ ರಾಜ್ಯಪಾಲರ ನಿರ್ದೇಶನ ಕೋರಲಾಗಿದ್ದು, ನಿರ್ದೇಶನವನ್ನು ನಿರೀಕ್ಷಿಸಲಾಗಿದೆ.</td></tr>
<tr><td>(ಉ)</td><td>ವಿಶ್ವವಿದ್ಯಾಲಯಗಳಿಗೆ ಸೂಕ್ತ ಅನುದಾನ ನೀಡಲಾಗದೇ ರದ್ದತಿಗೆ ಮುಂದಾಗಿರುವುದು ನಿಜವೇ? (ಸಂಪೂರ್ಣ ಮಾಹಿತಿ ನೀಡುವುದು)</td><td>ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟದ ಮುಂದೆ ಮಂಡಿಸಿ, ಅದರ ನಿರ್ಣಯದಂತೆ ಮುಂದಿನ ಕ್ರಮವಹಿಸಲಾಗುವುದು.</td></tr>
</table>

ಸಂಖ್ಯೆ: ಇಡಿ 65 ಹೆಚ್‌ಪಿಯು 2025)

(ಡಾ. ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು.